# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1) | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 694+695+696 |
| 2) | ಸದಸ್ಯರ ಹೆಸರು | : | ಶ್ರೀ ಸುನೀಲ್ ಗೌಡ ಬಸನ ಗೌಡ ಪಾಟೀಲ್ |
| 3) | ಉತ್ತರಿಸಬೇಕಾದ ದಿನಾಂಕ | : | 12.03.2020 |
| 4) | ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರದಲ್ಲಿ ವಿಮಾನ ನಿಲ್ದಾಣದ ಕಾಮಗಾರಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾಮಗಾರಿ ಪ್ರಾರಂಭವಾಗಿಲ್ಲವೇಕೆ? | ವಿಜಯಪುರ ಜಿಲ್ಲೆ ಬರಣಪೂರ ಗ್ರಾಮದ ಹತ್ತಿರ "ನೋ ಫ್ರೀಲ್" ಮಾದರಿಯಲ್ಲಿ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ಸುಮಾರು 727 ಎಕರೆ ಜಮೀನುಗಳನ್ನು ವಿಮಾನ ನಿಲ್ದಾಣ ನಿರ್ಮಾಣಕ್ಕೆ ಭೂ-ಸ್ವಾಧೀನ ಪಡಿಸಿಕೊಳ್ಳಲಾಗಿದೆ. |
| ಆ) | ವಿಮಾನ ನಿಲ್ದಾಣ ನಿರ್ಮಾಣಕ್ಕೆ ಅಗತ್ಯಕ್ಕನುಗುಣವಾಗಿ ಭೂಸ್ವಾಧಿನ ಪಡಿಸಿಕೊಳ್ಳಲಾಗಿದೆಯೇ; ಭೂಸ್ವಾಧಿನ ಪಡಿಸಿಕೊಂಡಿದ್ದರೆ, ಎಷ್ಟು ಭೂಮಿಯನ್ನು ಸ್ವಾಧಿನ ಪಡಿಸಿಕೊಳ್ಳಲಾಗಿದೆ; (ಮಾಹಿತಿ ನೀಡುವುದು) | ವಿಮಾನ ನಿಲ್ದಾಣದ ಅಭಿವೃದ್ಧಿಗಾಗಿ ವಿಜಯಪುರ ಜಿಲ್ಲೆಯ ಬರಣಪೂರ ಗ್ರಾಮದ ಹತ್ತಿರ ಸುಮಾರು 727 ಎಕರೆ ಜಮೀನುಗಳನ್ನು ವಿಮಾನ ನಿಲ್ದಾಣ ನಿರ್ಮಾಣಕ್ಕೆ ಅಗತ್ಯಕ್ಕನುಗುಣವಾಗಿ ಭೂ-ಸ್ವಾಧೀನ ಪಡಿಸಿಕೊಳ್ಳಲಾಗಿದೆ. |
| ಇ) | ಯಾವ ಕಾಲಮಿತಿಗೆ ಒಳಪಟ್ಟು ವಿಮಾನ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದು; ಸದರಿ ಕಾಮಗಾರಿಯು ಎಷ್ಟು ವರ್ಷಗಳಿಂದ ಪ್ರಗತಿಯಲ್ಲಿದೆ ಮತ್ತು ಇದುವರೆವಿಗೂ ಈ ಯೋಜನೆಗೆ ಬಿಡುಗಡೆಯಾದ ಹಣ ಎಷ್ಟು; (ವಿವರ ನೀಡುವುದು) | ವಿಜಯಪುರ ವಿಮಾನ ನಿಲ್ದಾಣವನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿ ಪಡಿಸಲು ತೀರ್ಮಾನಿಸಿ ಯಶಸ್ವಿ ಬಿಡ್ಡುದಾರರಾದ ಮೆ॥ಮಾರ್ಗ್‌ರವರನ್ನು ಅಭಿವೃದ್ಧಿದಾರರನ್ನಾಗಿ 2010ರಲ್ಲಿ ಆಯ್ಕೆ ಮಾಡಲಾಗಿತ್ತು. ಆದರೆ ಅಭಿವೃದ್ಧಿದಾರರು ವಿಮಾನ ನಿಲ್ದಾಣಕ್ಕಾಗಿ ಗುರುತಿಸಿರುವ ಜಮೀನುಗಳು ಸಮತಟ್ಟಾಗಿಲ್ಲದಿರುವುದರಿಂದ ಹಾಗೂ ಬಂಡೆಗಳು ಇರುವುದರಿಂದ ವಿಜಯಪುರ ವಿಮಾನ ನಿಲ್ದಾಣ ಯೋಜನೆಯು ಆರ್ಥಿಕವಾಗಿ ಮತ್ತು ತಾಂತ್ರಿಕವಾಗಿ ಕಾರ್ಯಸಾಧ್ಯವಲ್ಲವೆಂದು ತಿಳಿಸಿ ಯೋಜನೆಯಿಂದ ಹಿಂದೆ ಸರಿಯಲು ಇಚ್ಚಿಸಿದ್ದರಿಂದ ಅಭಿವೃದ್ಧಿದಾರರೊಂದಿಗೆ ಮಾಡಿಕೊಂಡಿದ್ದ ಯೋಜನಾ ಅಭಿವೃದ್ಧಿ ಒಪ್ಪಂದವನ್ನು ದಿನಾಂಕ:10.01.2014 ರಂದು ರದ್ದುಗೊಳಿಸಲಾಗಿರುತ್ತದೆ.<br>ವಿಜಯಪುರ ವಿಮಾನ ನಿಲ್ದಾಣದ ಅಭಿವೃದ್ಧಿಗಾಗಿ ಈವರೆವಿಗೆ ಭೂಸ್ವಾಧಿನ ವೆಚ್ಚಕ್ಕಾಗಿ ರೂ.63.46 ಕೋಟಿ ವೆಚ್ಚವನ್ನು ಭರಿಸಲಾಗಿದೆ. |

| | | |
|---|---|---|
| ಈ) | ವಿಮಾನ ನಿಲ್ದಾಣ ಕಾಮಗಾರಿಗೆ ಸಂಬಂಧಿಸಿದಂತೆ ಖರ್ಚು-ವೆಚ್ಚ ಹಾಗೂ ಪ್ರಸ್ತುತ ಸ್ಥಿತಿಗತಿಗಳೇನು; ಸದರಿ ವಿಮಾನ ನಿಲ್ದಾಣ ಕಾಮಗಾರಿಗೆ ಅನುದಾನದ ಕೊರತೆ ಇದೆಯೇ; (ಸಂಪೂರ್ಣ ವಿವರ ನೀಡುವುದು) | ವಿಜಯಪುರ ವಿಮಾನ ನಿಲ್ದಾಣವನ್ನು ಅಭಿವೃದ್ಧಿ ಪಡಿಸಲು ಭೂಸ್ವಾಧೀನಕ್ಕಾಗಿ ರೂ.63.46 ಕೋಟಿಗಳನ್ನು ಖರ್ಚು ಮಾಡಲಾಗಿರುತ್ತದೆ.<br>ವಿಮಾನ ನಿಲ್ದಾಣವನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿ ಪಡಿಸಲು ಒಪ್ಪಂದ ತಾಂತ್ರಿಕ ಕಾರಣಗಳಿಂದ ರದ್ದಾಗಿದ್ದರಿಂದ ಲೋಕೋಪಯೋಗಿ ಇಲಾಖೆಯ ವತಿಯಿಂದ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲು ಕ್ರಮವಹಿಸಲಾಗುತ್ತಿದೆ. ಅಂತಿಮ ಯೋಜನಾ ವರದಿ ಬಂದ ನಂತರ ಪರಿಶೀಲಿಸಿ ಕ್ರಮವಹಿಸಲಾಗುವುದು. |
| ಉ) | ಈ ಕಾಮಗಾರಿಯ ಬಗ್ಗೆ ಸರ್ಕಾರ ಆಸಕ್ತಿ ತೋರದೆ ಇರಲು ಕಾರಣವೇನು; ಇದಕ್ಕೆ ಇರುವ ಅಡೆ-ತಡೆಗಳು ಏನು; | |
| ಊ) | ಸದರಿ ಕಾಮಗಾರಿಗೆ ಬೇಕಾಗುವ ಅಗತ್ಯ ವೆಚ್ಚವನ್ನು ಅಂದಾಜಿಸಲಾಗಿದೆಯೇ? (ವಿವರಗಳನ್ನು ನೀಡುವುದು) | ಎ.ಟಿ.ಆರ್-72 ಮಾದರಿಯ ಅಥವಾ ಇದಕ್ಕೆ ಸಮನಾದ ವಿಮಾನಗಳ ಕಾರ್ಯಾಚರಣೆಗೆ ಸಂಬಂಧಿಸಿದಂತೆ ಸುಮಾರು ರೂ.220.00 ಕೋಟಿ ಎಂದು ಅಂದಾಜಿಸಲಾಗಿದ್ದು, ವಿವಿಧ ಹಂತದ ತಾಂತ್ರಿಕ ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ಮೂಅಇ 39 ರಾಅವಿ 2020

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ